<u>ಸಿಸಿ ನಂ. 288/2023</u> <u>ಪಿಡಬ್ಲೂ :1</u>

<u>ದಿನಾಂಕಃ 05-12-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.</u>

ಫಿರ್ಯಾದುದಾರ ಸಂಸ್ಥೆಯ ವ್ಯವಸ್ಥಾಪಕರ ಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆ ಎಂದು ಹಾಗೂ ಸದರಿ ವ್ಯವಸ್ಥಾಪಕರನ್ನು ಪಿಡಬ್ಲ್ಯೂ-1 ಎಂದು ಪರಗಣಿಸಲಾಗಿದೆ .

**<u>ಮುಂದುವರೆದ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಎನ್ ಎಸ್ ಹೆಚ್ ವಕೀಲರಿಂದಃ</u>**

2. ಫಿರ್ಯಾದುದಾರ ಸಂಸ್ಥೆಯವರು ನನಗೆ ನೀಡಿದ ಅಧಿಕಾರ ಪತ್ರದ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ -2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು, ಸಾಲದ ಅರ್ಜಿಯ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಅರ್ಜಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಅರ್ಜಿಯ ಯಥಾ ನಕಲನ್ನು ನಿಪಿ-6 ಎಂದು ಗುರುತಿಸಲಾಯಿತು . ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಕರಾರು ಪತ್ರದ ಯಥಾ ನಕಲನ್ನು ನಿಪಿ-7 ಎಂದು ಗುರುತಿಸಲಾಯಿತು . ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ

. ಸದರಿ ಡಿಮಾಂಡ್ ಫ್ರಾಮಿಸರಿ ನೋಟಿನ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಡಿಮಾಂಡ್ ಫ್ರಾಮಿಸರಿ ನೋಟಿನ ಯಥಾ ನಕಲನ್ನು ನಿಪಿ -8 ಎಂದು ಗುರುತಿಸಲಾಯಿತು . ಮುದ್ದತಿ ವಚನ ಪತ್ರದ ಯುಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಮುದ್ದತಿ ವಚನ ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಮುದ್ದತಿ ವಚನ ಪತ್ರದ ಯಥಾ ನಕಲನ್ನು ನಿಪಿ -9 ಎಂದು ಗುರುತಿಸಲಾಯಿತು . ಹೈಪೊಥಿಕೇಶನ್ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಹೈಪೋಥಿಕೇಶನ್ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಹೈಪೋಥಿಕೇಶನ್ ಕರಾರು ಪತ್ರದ ಯಥಾ ನಕಲನ್ನು ನಿಪಿ-10 ಎಂದು ಗುರುತಿಸಲಾಯಿತು . ಎರಡು ವಚನ ಪತ್ರಗಳ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇನೆ . ಸದರಿ ವಚನ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ವಚನ ಪತ್ರಗಳ ಯಥಾ ನಕಲುಗಳನ್ನು ನಿಪಿ- 11 ಮತ್ತು 12 ಎಂದು, ಸಾಲದ ಖಾತೆಯ ಉತಾರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -13 ಎಂದು ಗುರುತಿಸಲಾಯಿತು .

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.